ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಭಾಗ : DEPARTMENT / SECTION :

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE 10/11/2019

ವಿ.ಕ. ದಿ: 10/11/2019

‘ಕೈ ಕತ್ತರಿಸುತ್ತೇನೆ’ ಎಂಬ ಹೇಳಿಕೆ | ಕೋರ್ಟ್ ಸೂಚನೆ ಮೇರೆಗೆ ಕೇಸ್

# ಶಿವಶಂಕರ್‌ರೆಡ್ಡಿ ವಿರುದ್ಧ ಎಫ್‌ಐಆರ್

**ಚಿಕ್ಕಬಳ್ಳಾಪುರ:** ಅನರ್ಹ ಶಾಸಕ ಡಾ.ಕೆ. ಸುಧಾಕರ್ ‘ಕೈ ಕತ್ತರಿಸುತ್ತೇನೆ’ ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದ ಗೌರಿಬಿದನೂರು ಕ್ಷೇತ್ರದ ಶಾಸಕ ಹಾಗೂ ಮಾಜಿ ಸಚಿವ ಎನ್.ಎಚ್. ಶಿವಶಂಕರರೆಡ್ಡಿ ವಿರುದ್ಧ ಗೌರಿಬಿದನೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.



ಮಂಚೇನಹಳ್ಳಿ ಹೊಸ ತಾಲೂಕು ಮಾಡಿದ ವಿಚಾರವಾಗಿ ಶಿವಶಂಕರ್‌ರೆಡ್ಡಿ ಅವರು ಕಾರ್ಯಕರ್ತರ ಸಭೆಯಲ್ಲಿ ಮಾತನಾಡುತ್ತಾ, ‘ನಮ್ಮ ಮತಕ್ಷೇತ್ರಕ್ಕೆ ಕೈ ಹಾಕಿದರೆ ಕೈ ಕತ್ತರಿಸುವೆ’ ಎಂದು ಸುಧಾಕರ್ ವಿರುದ್ಧ ಹೇಳಿಕೆ ನೀಡಿದ್ದರು. ಈ ಸಂಬಂಧ ಗೌರಿಬಿದನೂರು ಗ್ರಾಮಾಂತರ ಪೊಲೀಸರು ಮೊದಲು ಎನ್‌ಸಿಆರ್ (ಗಂಭೀರವಲ್ಲದ ಪ್ರಕರಣ) ದಾಖಲಿಸಿದ್ದರು. ಆದರೆ, ಈ ಬಗ್ಗೆ ಸುಧಾಕರ್ ಬೆಂಬಲಿಗ ಚಿಕ್ಕಬಳ್ಳಾಪುರ ನಿವಾಸಿ ರವಿಚಂದ್ರ ಕುಮಾರ್ ಎಂಬುವರು ಬೆಂಗಳೂರಿನ 81ನೇ ಅಡಿಷನಲ್ ಸಿಟಿ ಸಿವಿಲ್ ಸೆಷನ್ಸ್ ನ್ಯಾಯಾಲಯ (ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ)ದಲ್ಲಿ ಶಿವಶಂಕರರೆಡ್ಡಿ ವಿರುದ್ಧ ಪಿಸಿಆರ್(ನಾಗರಿಕ ಹಕ್ಕುಗಳ ರಕ್ಷಣಾ ಕಾಯ್ದೆ) ಅಡಿ ದೂರು ಸಲ್ಲಿಸಿ ಅವರ ಹೇಳಿಕೆ ಕುರಿತು ತನಿಖೆ ನಡೆಸುವಂತೆ ಮನವಿ ಮಾಡಿದ್ದರು.

ಹಾಗಾಗಿ ವಿಶೇಷ ನ್ಯಾಯಾಲಯವು, ಶಿವಶಂಕರರೆಡ್ಡಿ ಹೇಳಿಕೆ ವಿರುದ್ಧ ಪ್ರಕರಣ ದಾಖಲಿಸುವಂತೆ ಆದೇಶಿಸಿದೆ. ಈ ಸಂಬಂಧ ಡಿಸೆಂಬರ್ 2ರೊಳಗೆ ತನಿಖೆ ನಡೆಸಿ ವರದಿ ನೀಡುವಂತೆ ಪೊಲೀಸ್ ಇಲಾಖೆಗೆ ನಿರ್ದೇಶನ ನೀಡಿದೆ. ಕೋರ್ಟ್ ಸೂಚನೆ ಮೇರೆಗೆ ಶಿವಶಂಕರರೆಡ್ಡಿ ವಿರುದ್ಧ ಗೌರಿಬಿದನೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಐಪಿಸಿ ಸೆಕ್ಷನ್ 120ಬಿ (ಅಪರಾಧ ಪಿತೂರಿ), 124 (ಆಕ್ರಮಣಕಾರಿ ಹೇಳಿಕೆ), 141 (ಕಾನೂನು ಬಾಹಿರ ಸಭೆ), 506 (ಬೆದರಿಕೆ), 156(ಬಿ), 149 ಅಡಿ ಪ್ರಕರಣ ದಾಖಲಾಗಿದೆ.